# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 923 |
| ಉತ್ತರಿಸಬೇಕಾದ ದಿನಾಂಕ | 13.12.2023 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕೊಳಗೇರಿ ಅಭಿವೃದ್ಧಿ ಮಂಡಳಿ ಹಾಗೂ ರಾಜೀವ್ ಗಾಂಧಿ ವಸತಿ ನಿಗಮದಿಂದ ನಿರ್ಮಿಸಲಾಗುತ್ತಿರುವ ಎಷ್ಟು ಮನೆಗಳು ಇದುವರೆಗೂ ಪೂರ್ಣಗೊಳ್ಳದೇ ನೆನೆಗುದಿಗೆ ಬಿದ್ದವೆ; | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯು ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಯೊಂದಿಗೆ ರಾಜ್ಯ ಸರ್ಕಾರದ ವಸತಿ ಯೋಜನೆಗಳಾದ ಡಾ:ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆ ಮತ್ತು ವಾಜಪೇಯಿ ನಗರ ವಸತಿ ಯೋಜನೆಯನ್ನು ಸಂಯೋಜಿಸಿಕೊಂಡು ವಿವಿಧ ನಗರ / ಪಟ್ಟಣಗಳ ವ್ಯಾಪ್ತಿಯಲ್ಲಿ ಒಟ್ಟು 295 ಯೋಜನೆಗಳಿಂದ (Projects) 1,80,253 ಮನೆಗಳನ್ನು ನಿರ್ಮಾಣ ಮಾಡಲು ಕೇಂದ್ರ ಸರ್ಕಾರದಿಂದ ಅನುಮೋದನೆ ದೊರಕಿರುತ್ತದೆ.<br><br>ಅದರಂತೆ ಮಂಜೂರಾಗಿರುವ ಮನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತದೆ. ಯಾವುದೇ ಮನೆಗಳು ನೆನೆಗುದಿಗೆ ಬಿದ್ದಿರುವುದಿಲ್ಲ.<br><br>ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದಿಂದ ವಸತಿರಹಿತ ಕುಟುಂಬಗಳಿಗೆ ವಸತಿ ಸೌಕರ್ಯ ಒದಗಿಸಲು ಈ ಕೆಳಕಂಡ ವಸತಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ರಾಜ್ಯ ಪುರಸ್ಕೃತ ಯೋಜನೆಗಳು:<br>1. ಬಸವ ವಸತಿ ಯೋಜನೆ<br>2. ಡಾ. ಬಿ.ಆರ್.ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ & ನಗರ)<br>3. ದೇವರಾಜು ಅರಸು ವಸತಿ ಯೋಜನೆ (ಗ್ರಾಮೀಣ & ನಗರ)<br>4. ವಾಜಪೇಯಿ ನಗರ ವಸತಿ ಯೋಜನೆ<br>5. ಮುಖ್ಯಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ ಯೋಜನೆ (ಬೆಂಗಳೂರು ನಗರದಲ್ಲಿ ಮಾತ್ರ)<br>6. ಮುಖ್ಯಮಂತ್ರಿಗಳ ಗ್ರಾಮೀಣ & ನಗರ ನಿವೇಶನ ಯೋಜನೆ |

| | | |
|---|---|---|
| | | **ಕೇಂದ್ರ ಪುರಸ್ಕೃತ ವಸತಿ ಯೋಜನೆಗಳು:**<br>ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ & ನಗರ)<br><br>2010-11ನೇ ಸಾಲಿನಿಂದ ಇಲ್ಲಿಯವರೆಗೆ ಒಟ್ಟು 39,50,447 ಮನೆಗಳನ್ನು ಮಂಜೂರು ಮಾಡಲಾಗಿದೆ. ಈ ಪೈಕಿ 26,67,534 ಪೂರ್ಣಗೊಂಡಿದ್ದು, 5,35,432 ಮನೆಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. 2,94,134 ಮನೆಗಳು ಪ್ರಾರಂಭವಾಗಬೇಕಾಗಿದ್ದು, ಉಳಿದಂತೆ 4,53,347 ನಿಗಧಿತ ಅವಧಿಯಲ್ಲಿ ಪ್ರಾರಂಭವಾಗದ ಮನೆಗಳು ರದ್ದಾಗಿರುತ್ತದೆ ಹಾಗೂ ತಾಂತ್ರಿಕ / ವಿವಿಧ ಕಾರಣಗಳಿಂದ ತಡೆ ಹಿಡಿಯಲಾಗಿದೆ. |
| ಆ. | ಸದರಿ ಮನೆಗಳ ನಿರ್ಮಾಣ ದೀರ್ಘಕಾಲದಿಂದ ಅಪೂರ್ಣವಾಗಿರುವುದಕ್ಕೆ ಕಾರಣಗಳೇನು; | BLC ಮಾದರಿ ಮನೆಗಳಲ್ಲಿ ಫಲಾನುಭವಿಗಳೇ ಸ್ವತಃ ಮನೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದು, ಸರ್ಕಾರದಿಂದ ಸಹಾಯಧನ ಮಾತ್ರ ನೀಡಲಾಗುತ್ತಿದೆ. ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸುವಂತೆ ಫಲಾನುಭವಿಗಳಿಗೆ ಕಾಲಕಾಲಕ್ಕೆ ಸ್ಥಳೀಯ ಹಂತದಲ್ಲಿ ತಿಳುವಳಿಕೆ ಪತ್ರ ನೀಡಿ ಮನವೊಲಿಸಿ ಅಪೂರ್ಣ ಹಂತದಲ್ಲಿ ಇರುವ ಮನೆಗಳನ್ನು ಪೂರ್ಣಗೊಳಿಸಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>Affordable Housing in Partnership (ಎ.ಹೆಚ್.ಪಿ) ಮಾದರಿಯಡಿ ಅನುಷ್ಠಾನ ಸಂಸ್ಥೆಗಳಾದ ರಾಜೀವ್ ಗಾಂಧಿ ವಸತಿ ನಿಗಮ, ನಗರ ಸ್ಥಳೀಯ ಸಂಸ್ಥೆಗಳು G, G+1, G+2 ಮಾದರಿಗಳಲ್ಲಿ ಗುಂಪು ಮನೆಗಳನ್ನು ನಿರ್ಮಾಣ ಮಾಡಿ ಹಂಚಿಕೆ ಮಾಡಲಾಗುತ್ತದೆ. ಈ ಮಾದರಿಯಲ್ಲಿ ಕೇಂದ್ರ ಹಾಗೂ ಸರ್ಕಾರದ ಸಹಾಯಧನದೊಂದಿಗೆ ಫಲಾನುಭವಿಗಳ ವಂತಿಕೆಯು ಒಳಗೊಂಡಿರುತ್ತದೆ.<br><br>ಫಲಾನುಭವಿಗಳು ಆರ್ಥಿಕವಾಗಿ ಸಾಮಾಜಿಕವಾಗಿ ಹಿಂದುಳಿದ ವರ್ಗಕ್ಕೆ ಸೇರಿದ್ದು, ಸಕಾಲದಲ್ಲಿ ವಂತಿಕೆ ಪಾವತಿ ಮಾಡದ ಕಾರಣ ಅರ್ಧಕ್ಕೆ ನಿಂತಿರುವ ಕಾಮಗಾರಿ ಪೂರ್ಣಗೊಳಿಸುವ ಉದ್ದೇಶದಿಂದ ಹಂತ ಹಂತವಾಗಿ ಮನೆಗಳನ್ನು ಪೂರ್ಣಗೊಳಿಸಲು ಯೋಜಿಸಲಾಗಿದ್ದು, ಫಲಾನುಭವಿಗಳ ವಂತಿಕೆಗೆ ಎದುರಾಗಿ ಮನೆಗಳನ್ನು ಹಂಚಿಕೆ ಮಾಡಿ ವಂತಿಕೆಯನ್ನು ವಸೂಲಿ ಮಾಡಲು ಕ್ರಮವಹಿಸಲಾಗುತ್ತಿದೆ. ಫಲಾನುಭವಿಗಳಿಗೆ ಬ್ಯಾಂಕ್ ಸಾಲ ಸೌಲಭ್ಯವನ್ನು ಪಡೆಯಲು ಅವಕಾಶ ಕಲ್ಪಿಸಲಾಗುತ್ತಿದೆ. |
| ಇ. | ಅಪೂರ್ಣವಾಗಿರುವ ಮನೆಗಳ ನಿರ್ಮಾಣವನ್ನು ಪೂರ್ಣಗೊಳಿಸಲು | ವಿವಿಧ ಯೋಜನೆಗಳಡಿ 12 ಲಕ್ಷ ಮನೆಗಳನ್ನು ಪೂರ್ಣಗೊಳಿಸಲು ರೂ.17,815.60 ಕೋಟಿಗಳ |

| | | |
|---|---|---|
| | ಸರ್ಕಾರ ಏನು ಕ್ರಮ ವಹಿಸಿದೆ; ಹಾಗೂ ಬೇಕಾಗಿರುವ ಅನುದಾನದ ವಿವರಗಳ ಮಾಹಿತಿ ನೀಡುವುದು; | ಅನುದಾನ ಅಗತ್ಯವಿದ್ದು, ಈ ಪೈಕಿ 2023-24ನೇ ಸಾಲಿನ ಆಯವ್ಯಯದಲ್ಲಿ ರೂ 2940.00 ಕೋಟಿಗಳನ್ನು ಒದಗಿಸಲಾಗಿರುತ್ತದೆ. ಪ್ರಸ್ತುತ |
| ಈ. | ಯಾವ ಕಾಲಮಿತಿಯೊಳಗೆ ಸದರಿ ಮನೆಗಳನ್ನು ಪೂರ್ಣಗೊಳಿಸಿ, ವಸತಿ ರಹಿತರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗುವುದು ಹಾಗೂ ಆ ಸಂಬಂಧ ಸರ್ಕಾರ ಹಾಕಿಕೊಂಡಿರುವ ತಕ್ಷಣದ ಕಾರ್ಯಕ್ರಮ ಮತ್ತು ಯೋಜನೆಗಳೇನು? | ಸಾಲಿನಲ್ಲಿ 3 ಲಕ್ಷ ಮನೆಗಳನ್ನು ಪೂರ್ಣಗೊಳಿಸುವ ಗುರಿಯೊಂದಿಗೆ ನವೆಂಬರ್-2023 ರ ಅಂತ್ಯಕ್ಕೆ 1,17,500 ಮನೆಗಳನ್ನು ಪೂರ್ಣಗೊಳಿಸಲಾಗಿದ್ದು, ರೂ 1931.49 ಕೋಟಿ ಅನುದಾನವನ್ನು ವೆಚ್ಚ ಮಾಡಲಾಗಿರುತ್ತದೆ.<br><br>ಬಾಕಿ ಇರುವ ಮನೆಗಳನ್ನು ಪೂರ್ಣಗೊಳಿಸಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಹಂತ ಹಂತವಾಗಿ ವಸತಿ ರಹಿತರಿಗೆ ವಸತಿ ಸೌಕರ್ಯವನ್ನು ಕಲ್ಪಿಸಲಾಗುತ್ತಿದೆ. |

ಸಂಖ್ಯೆ :ವಇ 172 ಹೆಚ್‌ಎಫ್‌ಎ 2023

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು